# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ 80 ತಾಲ್ಲೂಕುಗಳಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಹಾಗೂ ಪರೀಕ್ಷಾ ಉಪಕರಣಗಳನ್ನು ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆರವರ ಪತ್ರ ಸಂಖ್ಯೆ: ಮುಇಂ/ಪಂರಾಇಂಇ/ರಸ್ತೆ ಶಾಖೆ/ತಾಂ.ಸ-4/ಸ.ಇಂ-4/2012-13, ದಿನಾಂಕ:14.02.2014.

2. ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯ ನಡವಳಿ ದಿನಾಂಕ:25.02.2014.

---

**ಪೀಠಿಕೆ:**

ರಾಜ್ಯದ 80 ತಾಲ್ಲೂಕುಗಳಲ್ಲಿ **NRDWP – Support Activity** ಘಟಕದಡಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಪರೀಕ್ಷಾ ಉಪಕರಣಗಳನ್ನು (ಭೌತಿಕ ಮತ್ತು ರಾಸಾಯನಿಕ ಅಂಶಗಳ) ಖರೀದಿಸಲು, ಮುಖ್ಯ ರಸಾಯನ ತಜ್ಞರ ಸಲಹೆಯಂತೆ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲಿ ಕನಿಷ್ಠ ದರಗಳನ್ನು ನಮೂದಿಸಿರುವ ಸಂಸ್ಥೆಯಾದ - ಮೆ॥ **Prasad Rayapati**ಯವರ ಟೆಂಡರ್ ಅಂಗೀಕರಿಸಿ **80** ತಾಲ್ಲೂಕು ಮಟ್ಟದ ಪ್ರಯೋಗಾಲಯಗಳನ್ನು ಸ್ಥಾಪಿಸಲು ಪರೀಕ್ಷಾ ಉಪಕರಣಗಳನ್ನು ಖರೀದಿಸಲು **ರೂ.33.00ಲಕ್ಷ** ದರದಲ್ಲಿ **ರೂ.2640.00ಲಕ್ಷ** ಮತ್ತು **ಮೂರು ವರ್ಷಗಳ ವಾರ್ಷಿಕ ಪರೀಕ್ಷೆ ಮೊತ್ತ ರೂ.975.00** ದರದಲ್ಲಿ ಒಟ್ಟು **ರೂ.7020.00ಲಕ್ಷಕ್ಕೆ** ಅನುಮೋದನೆ ನೀಡಬೇಕೆಂದು **CE/PRED** ಬೆಂಗಳೂರು ರವರು ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ಸರ್ಕಾರವನ್ನು ವಿನಂತಿಸಿದ್ದಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, **ದಿನಾಂಕ:25.02.2014** ರಂದು ನಡೆದ **SLEC** ಸಭೆಯಲ್ಲಿ ಮಂಡಿಸಿದ್ದು, ಸದರಿ ಸಭೆಯ ನಿರ್ಣಯದಂತೆ ಪ್ರತಿ ಮಾದರಿಯ ಪರೀಕ್ಷೆ ವೆಚ್ಚ ಕುರಿತು ಮರು ಸಂಧಾನ ನಡೆಸಿ, ಪ್ರತಿ ಮಾದರಿಯ ಪರೀಕ್ಷೆ ವೆಚ್ಚ **ರೂ.950.00ಕ್ಕೆ** ಸರಬರಾಜುದಾರರಿಂದ ಒಪ್ಪಿಗೆ ಪಡೆದು ಆದೇಶ ನೀಡುವ ಪ್ರಸ್ತಾಪಕ್ಕೆ ಅನುಮೋದನೆ ನೀಡಲು ನಿರ್ಧರಿಸಲಾಯಿತು. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 32 ಗ್ರಾನೀಸ(2) 2014 ಬೆಂಗಳೂರು, ದಿನಾಂಕ: 04.03.2014**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ರಾಜ್ಯದ **80** ತಾಲ್ಲೂಕುಗಳಲ್ಲಿ **NRDWP – Support Activity ಘಟಕದಡಿ ರೂ.2640.00ಲಕ್ಷ (ಇಪ್ಪತ್ತಾರು ಕೋಟಿ ನಲವತ್ತು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜಿನಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಹಾಗೂ **1ನೇ ವರ್ಷ, 2ನೇ ವರ್ಷ ಮತ್ತು 3ನೇ ವರ್ಷದ** ಪ್ರಯೋಗಾಲಯಗಳ ಪ್ರತಿ ಮಾದರಿ ಪರೀಕ್ಷೆಗೆ **ರೂ.950/-**ರ ದರದಲ್ಲಿ ಒಟ್ಟಾರೆ **ರೂ.6840.00ಲಕ್ಷ (ಅರವತ್ತೆಂಟು ಕೋಟಿ ನಲವತ್ತು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜಿನ ಟೆಂಡರ್‌ಗೆ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತುತ **80** ತಾಲ್ಲೂಕುಗಳಲ್ಲಿ ಪ್ರಯೋಗಾಲಯಗಳನ್ನು ಸ್ಥಾಪಿಸಲು ಹಾಗೂ ಪರೀಕ್ಷಾ ಉಪಕರಣಗಳನ್ನು ಖರೀದಿಸಲು **NRDWP – Support Activity / WQM&SP** ಘಟಕದಡಿ **2013-14**ರ ಸಾಲಿನಲ್ಲಿ ಲಭ್ಯವಿರುವ ಅನುದಾನದಡಿ ಟೆಂಡರ್ ನಿಬಂಧನೆಗಳನ್ವಯ ವೆಚ್ಚ ಭರಿಸಲು ಮತ್ತು **2014-15**ರಲ್ಲಿ ಅಗತ್ಯವಾದ ಬಾಕಿ ಅನುದಾನವನ್ನು ಸದರಿ ಕಾರ್ಯಕ್ರಮದಡಿ **CE/PRED** ಒದಗಿಸಿಕೊಳ್ಳತಕ್ಕದ್ದು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು, ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ **ಆದೇಶ ಸಂಖ್ಯೆ: ಗ್ರಾಅಪ/58/ಎಎಫ್‌ಎನ್/2012, ದಿನಾಂಕ:01.04.2013**ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇಮೇಲ್:rk3452000@yahoo.co.in
ಫೋನ್:22032806, ಫ್ಯಾಕ್ಸ್:22203175

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರುರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು-1.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
12. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್(TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ರಾಜ್ಯದ ಎಲ್ಲಾ **(30)** ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರು.
14. ರಾಜ್ಯದ ಎಲ್ಲಾ **(30)** ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
15. ರಾಜ್ಯದ ಎಲ್ಲಾ **(176)** ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು / ಪಂ.ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳು.
16. ರಾಜ್ಯದ ಎಲ್ಲಾ **(8)** ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು.
17. ರಾಜ್ಯದ ಎಲ್ಲಾ **(38)** ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರು.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, **PRED**, ಬೆಂಗಳೂರು-20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿ (ಪಂ.ರಾಜ್) - ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, **KRWSSA** ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಅಪರ ನಿರ್ದೇಶಕರು, ಆರ್ಥಿಕ – **KRWSSA** , **RDPR** ಇಲಾಖೆ ಇವರುಗಳ ಆಪ್ತ ಸಹಾಯಕರು.
21. M/s Prasad Rayapati, No.1534, 2nd Floor, Ratnasiri Apartments, 9th Main, "A" Block, Rajajinagar, Bangalore-10.
22. ಮ್ಯಾನೇಜರ್, ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರಂ ಬ್ರ್ಯಾಂಚ್, ಶೇಷಾದ್ರಿ ರಸ್ತೆ, ಬೆಂಗಳೂರು-02.
23. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
24. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
28. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.